ಕರ್ನಾಟಕ ಸರ್ಕಾರ

ಸಂಖ್ಯೆ:ಸಕಇ 147 ಎಸ್‌ಡಿಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:15-03-2021.

## ಸುತ್ತೋಲೆ

ವಿಷಯ: ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇದ & ಅವರ ಪುನರ್ವಸತಿ ಕಾಯ್ದೆ 2013ರ ಸೆಕ್ಷನ್ 18ರ ಪ್ರಕಾರ ಅಧಿಕಾರ & ಜವಬ್ದಾರಿಯನ್ನು ನಿರ್ವಹಿಸುವ ಬಗ್ಗೆ.

ಉಲ್ಲೇಖ: 1. ಮಾನ್ಯ ಉಚ್ಚ ನ್ಯಾಯಾಲಯದ ಪ್ರಕರಣ ಸಂಖ್ಯೆ. 8928/2020 (ಪಿಐಎಲ್) ಅನುಸರಣಾ ವರದಿಯನ್ನು ಸಲ್ಲಿಸುವ ಕುರಿತು.
2. ಅಧಿಸೂಚನೆ ಸಂಖ್ಯೆ: ಸಕಇ 237 ಎಸ್‌ಡಿಸಿ 2012 (3), ದಿನಾಂಕ:03-05-2014.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ನ್ಯಾಯಾಲಯದ ಪ್ರಕರಣಕ್ಕೆ ಸಂಬಂಧಿಸಿದಂತೆ, ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಅನುಸರಣಾ ವರದಿ ಸಲ್ಲಿಸಬೇಕಾಗಿರುತ್ತದೆ. ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇದ ಮತ್ತು ಅವರ ಪುನರ್ವಸತಿ ಕಾಯ್ದೆ 2013ರ ಸೆಕ್ಷನ್ 18 ರನ್ವಯ ಉಲ್ಲೇಖ (2) ರ ಅಧಿಸೂಚನೆಯಲ್ಲಿ ಎಂ.ಎಸ್ ಕಾಯ್ದೆ 2013ರನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸ್ಥಳೀಯ ಪ್ರಾಧಿಕಾರಕ್ಕೆ ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರು ಅಧಿಕಾರವನ್ನು ಪ್ರಧಾನ ಮಾಡಬಹುದಾಗಿರುತ್ತದೆ, ಹಾಗೆ ಪ್ರಧಾನ ಮಾಡಿದ ಅಧಿಕಾರವನ್ನು ಸ್ಥಳೀಯ ಅಧಿಕಾರಿಗಳು ಯಾಥವತ್ತು ತಮ್ಮ ಪರಿಮಿತಿಗಳೊಳಗೆ ಚಲಾಯಿಸತಕ್ಕದು ಅಥವಾ ನಿರ್ವಹಿಸತಕ್ಕದು.

ಆದರಂತೆ, ಎಂ.ಎಸ್ ಕಾಯ್ದೆ 2013ರನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಮ್ಮ ವ್ಯಾಪ್ತಿಯಲ್ಲಿ ತಮಗೆ ವಹಿಸಿರುವ ಅಧಿಕಾರ ಮತ್ತು ಕರ್ತವ್ಯಗಳನ್ನು ಜವಬ್ದಾರಿಯುತವಾಗಿ ನಿರ್ವಹಿಸಿ, ಎಂ.ಎಸ್ ಕಾಯ್ದೆ 2013ರನ್ನು ಕಡ್ಡಾಯವಾಗಿ ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಕಾಲಕಾಲಕ್ಕೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದೆ.

15/3/2021
(ಪಿ.ಎನ್.ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.

5. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಎಲ್ಲಾ ಮಹಾನಗರ ಪಾಲಿಕೆಯ ಆಯುಕ್ತರು (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಒಳಗೊಂಡಂತೆ) ಮತ್ತು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳು.
7. ರಾಜ್ಯದ ಎಲ್ಲಾ ಜಿಲ್ಲೆಯ ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
8. ರಾಜ್ಯದ ಎಲ್ಲಾ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ. (ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳ ಮುಖಾಂತರ)

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:-**

1. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.